# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಮಂಡ್ಯ

## ನೇಮಕಾತಿ ಅಧಿಸೂಚನೆ ಸಂಖ್ಯೆಃಸಿಆರ್‌ಆರ್.(ಡಿ.ಆರ್.)01/2018

**ದಿನಾಂಕಃ 18.06.2018**

ವಿಷಯಃ ಮಂಡ್ಯ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿಯಿರುವ 08 ಶೀಘ್ರಲಿಪಿಗಾರರ ಹಾಗೂ 12 ಬೆರಳಚ್ಚುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ ಘಟಕದಲ್ಲಿ ಖಾಲಿಯಿರುವ 08 ಶೀಘ್ರಲಿಪಿಗಾರರ ಹಾಗೂ 12 ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಧಿಸೂಚನೆಗೆ ಸಂಬಂಧಪಟ್ಟ ಮಾಹಿತಿ ಹಾಗೂ ಅರ್ಜಿ ನಮೂನೆಯು ಈ ಕಛೇರಿಯ ವೆಬ್‌ಸೈಟ್ **http://ecourts.gov.in/mandya** ದಲ್ಲಿ ಲಭ್ಯವಿರುತ್ತದೆ.

ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕಃ 18.07.2018ರ ಸಂಜೆ 4.00 ಗಂಟೆಯ ಒಳಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಕೊನೆಯ ದಿನಾಂಕವು ಸಾರ್ವತ್ರಿಕ ರಜಾದಿನವಾಗಿದ್ದಲ್ಲಿ, ಮುಂದಿನ ಕೆಲಸದ ದಿನದ ಕಛೇರಿಯ ಅವಧಿಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನವಾಗಿರುತ್ತದೆ.

ಅರ್ಜಿ ಸಲ್ಲಿಸಬೇಕಾದ ವಿಳಾಸಃ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಮಂಡ್ಯ ಜಿಲ್ಲೆ, ಮಂಡ್ಯ.

1. ಶೀಘ್ರಲಿಪಿಗಾರರುಃ

(1) ಹುದ್ದೆಗಳ ಸಂಖ್ಯೆಃ 08

(2) ವೇತನ ಶ್ರೇಣಿಃ 27650-650-29600-750-32600-850-36000-950-39800-1100-46400-1250-52650 ಹಾಗೂ ಇತರೆ ಭತ್ಯೆಗಳೊಂದಿಗೆ

(3) ಹುದ್ದೆಗಳ ವರ್ಗೀಕರಣಃ

ಹಿಂಬಾಕಿ ಹುದ್ದೆಃ 01

| ಮೀಸಲಾತಿ | ಗ್ರಾಮೀಣ | ಒಟ್ಟು |
|---|---|---|
| ಸಾಮಾನ್ಯ ವರ್ಗ | 01 | 01 |
| ಒಟ್ಟು | 01 | 01 |

ಖಾಲಿ ಇರುವ ಹುದ್ದೆಗಳು: 07

| ಮೀಸಲಾತಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಗ್ರಾಮೀಣ | ಒಟ್ಟು |
|---|---|---|---|---|
| ಸಾಮಾನ್ಯ ವರ್ಗ | 01 | 01 | 01 | 03 |
| ಪರಿಶಿಷ್ಟ ಜಾತಿ | 01 | - | - | 01 |
| ಪರಿಶಿಷ್ಟ ಪಂಗಡ | - | - | 01 | 01 |
| ಪ್ರವರ್ಗ-2ಎ | 01 | - | - | 01 |
| ಪ್ರವರ್ಗ-3ಎ | - | - | 01 | 01 |
| ಒಟ್ಟು | 03 | 01 | 03 | 07 |

(4) ಶೈಕ್ಷಣಿಕ ವಿದ್ಯಾರ್ಹತೆ:

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಹಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಹಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರತಕ್ಕದ್ದು.

(5) ಆಯ್ಕೆ ವಿಧಾನ:

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನಡೆಸಲಾಗುವುದು.

- ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, 45 ನಿಮಿಷಗಳಲ್ಲಿ ಲಿಪ್ಯಂತರಿಸುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

2. <u>ಬೆರಳಚ್ಚುಗಾರರು:</u>

(1) ಹುದ್ದೆಗಳ ಸಂಖ್ಯೆ: 12

(2) ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳೊಂದಿಗೆ

(3) ಹುದ್ದೆಗಳ ವರ್ಗೀಕರಣ:

<u>ಹಿಂಬಾಕಿ ಹುದ್ದೆಗಳು: 11</u>

| ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|
| ಸಾಮಾನ್ಯ ವರ್ಗ | 01 | 02 | 01 | 01 | 01 | 06 |
| ಪರಿಶಿಷ್ಟ ಜಾತಿ | - | - | - | - | 01 | 01 |
| ಪ್ರವರ್ಗ-1 | - | - | 01 | - | - | 01 |
| ಪ್ರವರ್ಗ-2ಎ | - | - | 01 | - | 01 | 02 |
| ಪ್ರವರ್ಗ-2ಬಿ | - | - | 01 | - | - | 01 |
| ಒಟ್ಟು | 01 | 02 | 04 | 01 | 03 | 11 |

<u>ಖಾಲಿ ಇರುವ ಹುದ್ದೆ: 01</u>

| ಮೀಸಲಾತಿ | ಮಹಿಳಾ ಅಭ್ಯರ್ಥಿ | ಒಟ್ಟು |
|---|---|---|
| ಸಾಮಾನ್ಯ ವರ್ಗ | 1 | 1 |
| ಒಟ್ಟು | 1 | 1 |

(4) <u>ಶೈಕ್ಷಣಿಕ ವಿದ್ಯಾರ್ಹತೆ:</u>

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.
- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಹಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರತಕ್ಕದ್ದು.

(5) ಆಯ್ಕೆ ವಿಧಾನಃ

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನಡೆಸಲಾಗುವುದು.

- ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅಭ್ಯರ್ಥಿಯು 15 ನಿಮಿಷಗಳ ಕಾಲ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಉಕ್ತಲೇಖನವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಸೂಚನೆಃ-

- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದಿದ್ದ ಪಕ್ಷದಲ್ಲಿ, ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇತರೇ ಹುದ್ದೆಗಳನ್ನು ಆಯಾ ವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ವರ್ಗಗಳ ಇತರೆ ವರ್ಗಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ವಯೋಮಿತಿಃ

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು;

(ಅ) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

(ಆ) ಗರಿಷ್ಟ ವಯೋಮಿತಿಃ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 | 40 ವರ್ಷ |

ವಯೋಮಿತಿ ಸಡಿಲಿಕೆ:

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

(1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

(2) ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ, ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

(3) ಅಭ್ಯರ್ಥಿಯು ಅಂಗವಿಕಲರಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕರಾಗಿದ್ದಲ್ಲಿ 10 ವರ್ಷಗಳು.

(4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ, ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ, ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು, ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

(7) ಮಾಜಿ ಸೈನಿಕರು, ವಿಧವೆಯರು, ಅಂಗವಿಕಲರು ಮತ್ತು ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ಪ್ರಮಾಣಪತ್ರಗಳನ್ನು ಸಲ್ಲಿಸಬೇಕು.

## ಅರ್ಜಿ ಸಲ್ಲಿಸುವ ವಿಧಾನ:

(1) ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

(2) ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ಲಗತ್ತಿಸಿದ ನಿಗದಿತ ಅರ್ಜಿ ನಮೂನೆಯಂತೆ ಬೆರಳಚ್ಚು ಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತಮ್ಮ ಕೈಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು, ಹಾಗೂ ಅರ್ಜಿ ನಮೂನೆಯಲ್ಲಿ ಹುದ್ದೆ, ವರ್ಗ ಹಾಗೂ ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(3) ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ, ಅದರ ಮೇಲೆ ಸಹಿ ಮಾಡತಕ್ಕದ್ದು.

(4) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು, ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು. ಒಂದೇ ಹುದ್ದೆಗೆ ವಿವಿಧ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವವರು ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಹಾಗೂ ಆ ಅರ್ಜಿಗಳಲ್ಲಿ ಕಡ್ಡಾಯವಾಗಿ ಯಾವ ವರ್ಗ/ ಮೀಸಲಾತಿಯಡಿಯಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿರುವಿರಿ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

(5) ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರ ಪ್ರಮಾಣಪತ್ರಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸತಕ್ಕದ್ದು. ಅರ್ಜಿಯೊಂದಿಗೆ ಮೂಲಪ್ರತಿಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ. ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆದಿರಬೇಕು.

## ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:

(1) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ ವರ್ಗಾವಣೆ ಪತ್ರ/ ಇನ್ನ್ಯಾವುದೇ ಅಧಿಕೃತ ದಾಖಲಾತಿಗಳು.

(2) ವಿದ್ಯಾರ್ಹತೆಯ ಬಗೆಗಿನ ಅಂಕಪಟ್ಟಿಗಳ ನಕಲು ಪ್ರತಿಗಳು.

(3) ಪ.ಜಾತಿ/ ಪ.ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು.

(4) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/96/ಸೇನನಿ/2005 ದಿನಾಂಕಃ 10.08.2005ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು, ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.

(5) ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ, ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

(6) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು, ನಮುನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣಪತ್ರವನ್ನು ಸಲ್ಲಿಸಬೇಕು.

(7) ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ದಿನಾಂಕಃ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.

(8) ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು, ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.

(9) ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ದಿನಾಂಕಃ 27.07.2001ರ ಸರ್ಕಾರಿ ಆದೇಶ ಸಂಖ್ಯೆಃಸಿಆಸುಇ/44/ಸೇನನಿ/2001ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣಪತ್ರವನ್ನು ಸಲ್ಲಿಸಬೇಕು.

(10) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ಸೈನಿಕ ಸೇವೆಯಿಂದ ಬಿಡುಗಡೆಯಾದ ಅಥವಾ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರವನ್ನು ಸಲ್ಲಿಸತಕ್ಕದ್ದು.

(11) ಸ್ವಯಂ ವಿಳಾಸವಿರುವ ರೂ.5/- ಅಂಚೆ-ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

(12) ಅಭ್ಯರ್ಥಿಗಳು ಅರ್ಜಿಯೊಂದಿಗೆ ಕೊನೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಯ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರಿಂದ ಪಡೆದ ನಡತೆ ಪ್ರಮಾಣಪತ್ರದ ಸ್ವಯಂ ದೃಢೀಕೃತ ಪ್ರತಿಯನ್ನು ಲಗ್ತೀಕರಿಸತಕ್ಕದ್ದು.

(13) ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ನಡತೆಯ ಬಗ್ಗೆ ತಮ್ಮ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ (ಹಿಂದೆ ಕಲಿತ ಶಾಲಾ ಅಥವಾ ಕಾಲೇಜು ಮುಖ್ಯಸ್ಥರನ್ನು ಹೊರತುಪಡಿಸಿ) ಅರ್ಜಿ ಸಲ್ಲಿಸುವ ದಿನಾಂಕದ ಆರು ತಿಂಗಳ ಒಳಗೆ

ಪಡೆದ ಎರಡು ಪ್ರಮಾಣಪತ್ರಗಳನ್ನು ಲಗತ್ತಿಸತಕ್ಕದ್ದು. (ಗಣ್ಯ ವ್ಯಕ್ತಿಗಳ ರುಜುವಿನಡಿಯಲ್ಲಿ ಹೆಸರು ಮತ್ತು ಮೊಹರು ಕಡ್ಡಾಯವಾಗಿ ಇರತಕ್ಕದ್ದು)

ಅಭ್ಯರ್ಥಿಗಳಿಗೆ ಸೂಚನೆಃ-

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

2. ಅಪೂರ್ಣವಾಗಿರುವ, ಸಹಿ ಮಾಡದ, ವಿದ್ಯಾರ್ಹತೆ, ಮೀಸಲಾತಿ, ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳ ಪ್ರತಿಗಳನ್ನು ಸಲ್ಲಿಸದ ಹಾಗೂ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಮೀಸಲಾತಿಯನ್ನು ಕೋರಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮೇಲೆ ನಮೂದಿಸಿರಬೇಕು.

4. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಅರ್ಹತಾ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗತಕ್ಕದ್ದು.

5. ಅಭ್ಯರ್ಥಿಗೆ ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ, ಅವರು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವುದಿಲ್ಲ.

ಪರಿವೀಕ್ಷಣಾ ಅವಧಿಃ

ಆಯ್ಕೆಯಾದ ಅಭ್ಯರ್ಥಿಗಳು, ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕರ್ನಾಟಕ ಸರ್ಕಾರದ ನಿಯಮಾನುಸಾರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

(ಹೆಚ್.ಪಿ. ವಿಜಯಕುಮಾರಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮಂಡ್ಯ.

ಪ್ರತಿಯನ್ನು ಮಾನ್ಯ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

ಪ್ರತಿಯನ್ನುಃ-

1. ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸುವ ಕುರಿತ ವಿನಂತಿಯೊಂದಿಗೆ.
2. ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು, ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
3. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು -ಇವರಿಗೆ.
4. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಮಂಡ್ಯ ಜಿಲ್ಲೆ, ಮಂಡ್ಯ -ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
5. ಮಂಡ್ಯ ಜಿಲ್ಲೆಯ ಎಲ್ಲಾ ಅಧೀನ ನ್ಯಾಯಲಯಗಳಿಗೆ, ವ್ಯಾಪಕ ಪ್ರಚಾರಕ್ಕಾಗಿ.
6. ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸೂಚನಾ ಫಲಕಕ್ಕೆ, ಹಾಗೂ
7. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.

# ಅರ್ಜಿ ನಮೂನೆ

ಸ್ವದೃಢೀಕರಿಸಿದ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರವನ್ನು ಅಂಟಿಸಬೇಕು.

ರವರಿಗೆ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮಂಡ್ಯ.

ಮಾನ್ಯರೇ,

ತಮ್ಮ ನ್ಯಾಯಾಲಯದ ಅಧಿಸೂಚನೆ ಸಂಖ್ಯೆಃಸಿಆರ್‌ಆರ್.(ಡಿ.ಆರ್.)**01/2018** ದಿನಾಂಕಃ **18.06.2018**ರ ಪ್ರಕಟಣೆ ಮೇರೆಗೆ ನಾನು ಕೆಳಕಂಡ ಮಾಹಿತಿಗಳೊಂದಿಗೆ ____________________ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | | | | |
|---|---|---|---|---|
| 1. | ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ) | | | |
| 2. | ತಂದೆ/ತಾಯಿ/ಗಂಡನ ಹೆಸರು | | | |
| 3. | ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ | | | |
| 4. | ಅಭ್ಯರ್ಥಿಯ ತಾತ್ಕಾಲಿಕ ವಿಳಾಸ ಮತ್ತು ದೂರವಾಣಿ ಸಂಖ್ಯೆ | | | |
| 5. | ಜನ್ಮ ದಿನಾಂಕ | | | |
| 6. | ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು) | ವರ್ಷಗಳು | ತಿಂಗಳುಗಳು | ದಿನಗಳು |
| 7. | ಲಿಂಗ | ಪುರುಷ | ಮಹಿಳೆ | |
| 8. | ರಾಷ್ಟ್ರೀಯತೆ | | | |
| 9. | ಧರ್ಮ ಮತ್ತು ಜಾತಿ | | | |
| 10. | ವೈವಾಹಿಕ ಸ್ಥಿತಿ | ವಿವಾಹಿತ | ಅವಿವಾಹಿತ | |

| | | | |
|---|---|---|---|
| 11. | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | | |
| 12. | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ? | ಹೌದು | ಇಲ್ಲ |
| 13. | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ? | ಹೌದು | ಇಲ್ಲ |

14. ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳುಃ- (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)
ಸೂಃ ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು

| ಶೈಕ್ಷಣಿಕ ವಿದ್ಯಾರ್ಹತೆ | ವಿದ್ಯಾರ್ಹತೆ ಹೊಂದಿದ ಊರು/ಸ್ಥಳ | ಉತ್ತೀರ್ಣರಾದ ವರ್ಷ | ಗರಿಷ್ಠ ಅಂಕಗಳು | ಪಡೆದ ಅಂಕಗಳು | ಶೇಕಡ ವಾರು ಅಂಕಗಳು |
|---|---|---|---|---|---|
| ಎಸ್.ಎಸ್.ಎಲ್.ಸಿ. | | | | | |
| ಕನ್ನಡ ಬೆರಳಚ್ಚು ಹಿರಿಯ ಶ್ರೇಣಿ | | | | | |
| ಆಂಗ್ಲ ಬೆರಳಚ್ಚು ಹಿರಿಯ ಶ್ರೇಣಿ | | | | | |
| ಕನ್ನಡ ಶೀಘ್ರಲಿಪಿ ಹಿರಿಯ ಶ್ರೇಣಿ | | | | | |
| ಆಂಗ್ಲ ಶೀಘ್ರಲಿಪಿ ಹಿರಿಯ ಶ್ರೇಣಿ | | | | | |

| | | |
|---|---|---|
| 15. | ಇತರೆ ವಿದ್ಯಾರ್ಹತೆ ಅಥವಾ ತರಬೇತಿ ಇದ್ದಲ್ಲಿ | |
| 16. | ಕಂಪ್ಯೂಟರ್ ತರಬೇತಿಯನ್ನು ಪಡೆದಿದ್ದಲ್ಲಿ ಪ್ರಮಾಣ ಪತ್ರಗಳ ಪ್ರತಿಗಳೊಂದಿಗೆ ವಿವರಗಳು | |
| 17. | ಅಭ್ಯರ್ಥಿಯು ಪ.ಜಾ., ಪ.ಪಂ., ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ವರ್ಗಕ್ಕೆ ಸೇರಿದ್ದಲ್ಲಿ ಜಾತಿ ಪ್ರಮಾಣ ಪತ್ರದ ನಕಲನ್ನು ಲಗತ್ತಿಸತಕ್ಕದ್ದು. ಈ ವರ್ಗಕ್ಕೆ ಸೇರದಿದ್ದಲ್ಲಿ ಸಾಮಾನ್ಯ ಅಭ್ಯರ್ಥಿ ಎಂದು ನಮೂದಿಸತಕ್ಕದ್ದು | |

| | | |
|---|---|---|
| 18. | ಅಭ್ಯರ್ಥಿಯು ಗ್ರಾಮೀಣ/ ಮಾಜಿ ಸೈನಿಕ/ ಅಂಗವಿಕಲ/ ಯೋಜನೆಗಳಿಂದ ನಿರಾಶ್ರಿತ ಗೊಂಡ/ ಕನ್ನಡ ಮಾಧ್ಯಮಕ್ಕೆ ಸೇರಿದ್ದಲ್ಲಿ ಸಂಬಂಧಪಟ್ಟ ಪ್ರಮಾಣ ಪತ್ರದ ನಕಲನ್ನು ಲಗತ್ತಿಸತಕ್ಕದ್ದು. | |
| 19. | ಅಭ್ಯರ್ಥಿಯು ಸರ್ಕಾರಿ ಸೇವೆಯಲ್ಲಿ ಇದ್ದೀರಾ? (ಇದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪತ್ರವನ್ನು ಲಗತ್ತಿಸುವುದು) | |
| 20. | ನಿಮ್ಮ ಸ್ವವಿಳಾಸವಿರುವ ರೂ.5/-ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ? | |

ಸೂಚನೆಃ ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

## ಘೋಷಣೆಃ-

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡುಬಂದಲ್ಲಿ ನನ್ನ ಅರ್ಜಿಯನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

ಸ್ಥಳಃ
ದಿನಾಂಕಃ

ಅಭ್ಯರ್ಥಿಯ ಸಹಿ.